**ಅಧಿಕ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ, ನ್ಯಾಯಾಲಯ, ಮಧುಗಿರಿ.**

**ಸಿ.ಸಿ ಸಂಖ್ಯೆ:** 2086/2023

| | | |
|---|---|---|
| ಹೆಸರು : | ಸಲ್ಮಾ | ಚಾಸಾಃ 2 |
| ತಂದೆ/ಗಂಡನ ಹೆಸರು: | ಶೇಖ್ ಮೊಹಮ್ಮದ್ | ಪ್ರಾಸಾಃ 2 |
| ವಯಸ್ಸು: | 45 ವರ್ಷ | ಸಾಕ್ಷಿಯನ್ನು ದಿನಾಂಕಃ 20.02.2026 ರಂದು ಪ್ರಮಾಣೀಕರಿಸಲಾಯಿತು. |
| ಉದ್ಯೋಗ: | ಬೀಡಿ ಕಟ್ಟುವ ಕೆಲಸ | |
| ವಾಸ : | ದಂಡಿನದಿಬ್ಬ<br>ದೊಡ್ಡೇರಿ ಹೋಬಳಿ,<br>ಮಧುಗಿರಿ ತಾಲ್ಲೂಕು | |

**ಮುಖ್ಯ ವಿಚಾರಣೆಃ ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರಿಂದಃ-**

ಚಾಸಾ-1 ನನ್ನ ಮಗ. ಆರೋಪಿತರು ಚಾಸಾ-1 ರವರೊಂದಿಗೆ ಹಾಗೂ ನನ್ನೊಂದಿಗೆ ಯಾವುದೇ ಜಗಳ ಮಾಡಿಲ್ಲ. ಈ ಪ್ರಕರಣದ ಬಗ್ಗೆ ನನಗೆ ಏನೂ ಗೊತ್ತಿರುವುದಿಲ್ಲ. ನಾನು ಪೊಲೀಸರ ಮುಂದೆ ಯಾವುದೇ ಹೇಳಿಕೆಯನ್ನು ಕೊಟ್ಟಿರುವುದಿಲ್ಲ.

**(ಈ ಹಂತದಲ್ಲಿ ಸಾಕ್ಷಿಯನ್ನು ಪೂರ್ಣ ಪ್ರಮಾಣದ ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಎಪಿಪಿ ರವರು ಅನುಮತಿ ಕೋರಿರುತ್ತಾರೆ. ದಾಖಲೆಗಳನ್ನು ಪರಿಶೀಲಿಸಿ ಅನುಮತಿಸಿದೆ.)**

**ಪಾಟೀ ಸವಾಲು:ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರಿಂದಃ-**

ದಿಃ 05.08.2023 ಮಧ್ಯಾಹ್ನ 02.50 ಗಂಟೆಗೆ ಆರೋಪಿತರು ಚಾಸಾ-1 ರವರ ಅಂಗಡಿಯ ಮುಂಭಾಗ ಏಕೆ ನೋಟೀಸು ಕೊಟ್ಟಿದ್ದೀಯ ಎಂದು ಚಾಸಾ-1 ರವರಿಗೆ ಅವಾಚ್ಯ ಶಬ್ದಗಳಿಂದ ಬೈದು ಗಲಾಟೆ ಮಾಡಿದರು ಎಂದರೆ ಸರಿಯಲ್ಲ. 2 ನೇ ಆರೋಪಿಯು ಮರದ ಕಡ್ಡಿಯಿಂದ ಚಾಸಾ-1

ರವರ ಬಲಭುಜಕ್ಕೆ ಹೊಡೆದರು ಎಂದರೆ ಸರಿಯಲ್ಲ. ಆಗ ಜಗಳ ಬಿಡಿಸಲು ಬಂದ ನನಗೆ 2 ನೇ ಆರೋಪಿ ಮೈ-ಕೈಗೆ ಹೊಡೆದು ಬಲಗೈನ ಉಂಗುರದ ಬೆಳರನ್ನು ಮುರಿದು ತೀವ್ರ ಸ್ವರೂಪದ ಗಾಯವುಂಟು ಮಾಡಿದರು ಎಂದರೆ ಸರಿಯಲ್ಲ. 3 ನೇ ಆರೋಪಿ ಚಾಸಾ-1 ರವರಿಗೆ ಪ್ರಾಣ ಬೆದರಿಕೆ ಹಾಕಿದರು ಎಂದರೆ ಸರಿಯಲ್ಲ. ನಾನು ಪೊಲೀಸರ ಮುಂದೆ ಯಾವುದೇ ಹೇಳಿಕೆಯನ್ನು ನೀಡಿರುವುದಿಲ್ಲ. ನಾನು ಈ ಪ್ರಕರಣದಲ್ಲಿ ಗಾಯಗೊಂಡಿದ್ದು ಚಿಕಿತ್ಸೆ ಪಡೆದಿರುತ್ತೇನೆ ಎಂದರೆ ಸರಿಯಲ್ಲ. ಆರೋಪಿತರ ಜೊತೆ ರಾಜಿ ಮಾಡಿಕೊಂಡಿದ್ದೇನೆ ಎಂದರೆ ಸರಿ. ಆರೋಪಿತರ ಜೊತೆ ರಾಜಿ ಮಾಡಿಕೊಂಡು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

ನಾನು ಮೇಲ್ಕಂಡ ... ... ... ... ... ... ... ಮತ್ತೆ ನೋಡಿದರೆ ಗುರುತಿಸುತ್ತೇನೆ. ಸದರಿ ಹೇಳಿಕೆಯ ಭಾಗವನ್ನು ಸಾಕ್ಷಿಗೆ ಓದಿ ಹೇಳಿದ್ದು ಅವರು ನಿರಾಕರಿಸಿರುತ್ತಾರೆ. ಸದರಿ ಹೇಳಿಕೆಯನ್ನು ನಿಪಿ-2 ಎಂದು ಗುರುತಿಸಲಾಯಿತು.

**ಪಾಟೀ ಸವಾಲು: ಆರೋಪಿ ಪರ ಶ್ರೀ ಎಲ್.ಬಿ.ಆರ್. ವಕೀಲರಿಂದಃ-**

ಏನೂ ಇರುವುದಿಲ್ಲ ಎಂದು ತಿಳಿಸಿರುತ್ತಾರೆ.

**ಮರುವಿಚಾರಣೆಃ ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚುಗಾರರಿಗೆ ಉಕ್ತ ಲೇಖನ ಕೊಟ್ಟು ಓದಿ ನೋಡಿ ಸರಿಪಡಿಸಿ ನಂತರ ಮಾಡಲಾಯಿತು)

**ಓ ಹೇ ಕೇ ಸ ಇ ಎ ಒ**

**ಸಹಿ/-**

**(ಎ.ಎನ್.ಕಾಂತಮ್ಮ)**
**ಅಧಿಕ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ**

ಸಿ.ಸಿ.ಸಂಖ್ಯೆ 2086/2026

ಫ್ರಾಸಾಃ 1

ಮಧುಗಿರಿ.

# ಅಧಿಕ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ, ನ್ಯಾಯಾಲಯ, ಮಧುಗಿರಿ.

## ಸಿ.ಸಿ ಸಂಖ್ಯೆಃ 2086/2023

| | | |
|---|---|---|
| ಹೆಸರು: | ಮೊಹಮ್ಮದ್ ರಫೀಕ್ | ಚಾಸಾಃ 1 |
| ತಂದೆ/ಗಂಡನ ಹೆಸರು: | ಶೇಖ್ ಮೊಹಮ್ಮದ್ | ಫ್ರಾಸಾಃ 1 |
| ವಯಸ್ಸು: | 30 ವರ್ಷ | ಸಾಕ್ಷಿಯನ್ನು ದಿನಾಂಕಃ 20.02.2026 ರಂದು ಪ್ರಮಾಣೀಕರಿಸಲಾಯಿತು. |
| ಉದ್ಯೋಗ: | ವ್ಯಾಪಾರ | |
| ವಾಸ: | ದಂಡಿನದಿಬ್ಬ ದೊಡ್ಡೇರಿ ಹೋಬಳಿ, ಮಧುಗಿರಿ ತಾಲ್ಲೂಕು | |

**<u>ಮುಖ್ಯ ವಿಚಾರಣೆಃ ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರಿಂದಃ-</u>**

ಆರೋಪಿತರು ನನ್ನೊಂದಿಗೆ ಯಾವುದೇ ಜಗಳ ಮಾಡಿಲ್ಲ. ಈ ಪ್ರಕರಣದ ಬಗ್ಗೆ ನನಗೆ ಏನೂ ಗೊತ್ತಿರುವುದಿಲ್ಲ. ಸಾಕ್ಷಿ ಒಂದು ದಾಖಲೆಯನ್ನು ನೋಡಿ ಗುರುತಿಸಿದ್ದು ಅದನ್ನು ನಿಪಿ-1 ಎಂದು ಸಾಕ್ಷಿಯ ಸಹಿಯನ್ನು ನಿಪಿ-1(ಎ) ಎಂದು ಗುರುತಿಸಲಾಯಿತು. ನಿಪಿ-1 ರಲ್ಲಿರುವ ವಿಚಾರಗಳು ನನಗೆ ಗೊತ್ತಿಲ್ಲ. ನಂತರ ನಾನು ಹೋಗಿ ಪೊಲೀಸ್ ಠಾಣೆಗೆ ಪಿರ್ಯಾದು ನೀಡಿರುತ್ತೇನೆ.

**(ಈ ಹಂತದಲ್ಲಿ ಸಾಕ್ಷಿಯನ್ನು ಪೂರ್ಣ ಪ್ರಮಾಣದ ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಎಪಿಪಿ ರವರು ಅನುಮತಿ ಕೋರಿರುತ್ತಾರೆ. ದಾಖಲೆಗಳನ್ನು ಪರಿಶೀಲಿಸಿ ಅನುಮತಿಸಿದೆ.)**

**<u>ಪಾಟೀ ಸವಾಲು:ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರಿಂದಃ-</u>**

ಸಿ.ಸಿ.ಸಂಖ್ಯೆ 2086/2026

**ಫ್ರಾಸಾಃ 1**

ದಿಃ 05.08.2023 ಮಧ್ಯಾಹ್ನ 02.50 ಗಂಟೆಗೆ ಆರೋಪಿತರು ನನ್ನ ಅಂಗಡಿಯ ಮುಂಭಾಗ ಏಕೆ ನೋಟೀಸು ಕೊಟ್ಟಿದ್ದೀಯ ಎಂದು ನನ್ನಗೆ ಅವಾಚ್ಯ ಶಬ್ದಗಳಿಂದ ಬೈದು ಗಲಾಟೆ ಮಾಡಿದರು ಎಂದರೆ ಸರಿಯಲ್ಲ. 2 ನೇ ಆರೋಪಿಯು ಮರದ ಕಡ್ಡಿಯಿಂದ ನನ್ನ ಬಲಭುಜಕ್ಕೆ ಹೊಡೆದರು ಎಂದರೆ ಸರಿಯಲ್ಲ. ಆಗ ಜಗಳ ಬಿಡಿಸಲು ಬಂದ ಚಾಸಾ-2 ರವರಿಗೆ 2 ನೇ ಆರೋಪಿ ಮೈ-ಕೈಗೆ ಹೊಡೆದು ಬಲಗೈನ ಉಂಗುರದ ಬೆಳರನ್ನು ಮುರಿದು ತೀವ್ರ ಸ್ವರೂಪದ ಗಾಯವುಂಟು ಮಾಡಿದರು ಎಂದರೆ ಸರಿಯಲ್ಲ. 3 ನೇ ಆರೋಪಿ ನನಗೆ ಫ್ರಾಣ ಬೆದರಿಕೆ ಹಾಕಿದರು ಎಂದರೆ ಸರಿಯಲ್ಲ. ಈ ಬಗ್ಗೆ ನಾನು ಪಿರ್ಯಾದನ್ನು ನೀಡಿರುತ್ತೇನೆ ಎಂದರೆ ಸರಿಯಲ್ಲ. ನಾನು ಈ ಪ್ರಕರಣದಲ್ಲಿ ಗಾಯಗೊಂಡಿದ್ದು ಚಿಕಿತ್ಸೆ ಪಡೆದಿರುತ್ತೇನೆ ಎಂದರೆ ಸರಿಯಲ್ಲ. ಆರೋಪಿತರ ಜೊತೆ ರಾಜಿ ಮಾಡಿಕೊಂಡಿದ್ದೇನೆ ಎಂದರೆ ಸರಿ. ಆರೋಪಿತರ ಜೊತೆ ರಾಜಿ ಮಾಡಿಕೊಂಡು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲು: ಆರೋಪಿ ಪರ ಶ್ರೀ ಎಲ್.ಬಿ.ಆರ್. ವಕೀಲರಿಂದಃ-**

ಏನೂ ಇರುವುದಿಲ್ಲ ಎಂದು ತಿಳಿಸಿರುತ್ತಾರೆ.

**ಮರುವಿಚಾರಣೆಃ ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚುಗಾರರಿಗೆ ಉಕ್ತ ಲೇಖನ ಕೊಟ್ಟು ಓದಿ ನೋಡಿ ಸರಿಪಡಿಸಿ ನಂತರ ಮಾಡಲಾಯಿತು)

**ಓ ಹೇ ಕೇ ಸ ಇ ಎ ಒ**

**ಸಹಿ/-**

**(ಎ.ಎನ್.ಕಾಂತಮ್ಮ)**
**ಅಧಿಕ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ**
**ಮಧುಗಿರಿ.**